**2003 ರ ಕರ್ನಾಟಕ ಅಧಿನಿಯಮ ಸಂಖ್ಯೆ 4**

# ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2003

## ಪ್ರಕರಣಗಳ ಪಟ್ಟಿ

**ಪ್ರಕರಣಗಳು**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ

2. 4ನೇ ಪ್ರಕರಣದ ತಿದ್ದುಪಡಿ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ದ ಕರ್ನಾಟಕ ಅಧಿನಿಯಮ 29) 4ನೇ ಪ್ರಕರಣದ (ಡಿ) ಖಂಡವು, ಸರ್ಕಾರಿ ಇಲಾಖೆಗಳ, ಸಾರ್ವಜನಿಕ ವಲಯ ಉದ್ಯಮಗಳ, ಮಂಡಳಿಗಳ, ನಿಗಮಗಳ ಮತ್ತು ಸರ್ಕಾರವು ನಿರ್ದಿಷ್ಟಪಡಿಸಿದ ಅಂಥ ಇತರ ಸಂಸ್ಥೆಗಳ ಸಂಬಂಧದಲ್ಲಿ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಎರಡು ವರ್ಷಗಳ ಅವಧಿಗಾಗಿ, ಅಧಿನಿಯಮದ ಅನ್ವಯಿಸುವಿಕೆಯಿಂದ ವಿನಾಯಿತಿಗೊಳಿಸುವುದಕ್ಕಾಗಿ ಉಪಬಂಧ ಕಲ್ಪಿಸುತ್ತದೆ. ಈಗ ಇರುವ ಎರಡು ವರ್ಷಗಳ ವಿನಾಯಿತಿ ಅವಧಿಯನ್ನು ಮೂರು ವರ್ಷಗಳಿಗೆ ವಿಸ್ತರಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2003ರ ವಿಧಾನಸಭೆಯ ವಿಧೇಯಕ ಸಂಖ್ಯೆ 3)

(ಭಾರತ ಸಂವಿಧಾನದ ಏಳನೇ ಅನುಸೂಚಿಯ ಎರಡನೇ ಪಟ್ಟಿಯ 5ನೇ ನಮೂದು ಹಾಗೂ ಮೂರನೇ ಪಟ್ಟಿಯ 12ನೇ ನಮೂದು)

## 2003 ರ ಕರ್ನಾಟಕ ಅಧಿನಿಯಮ ಸಂಖ್ಯೆ 4

*(2003 ರ ಮಾರ್ಚ್ ಇಪ್ಪತ್ತೇಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)*

# ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2003

*(2003 ರ ಮಾರ್ಚ್ ಇಪ್ಪತ್ತೇಳನೇ ದಿನಾಂಕದಂದು ಕರ್ನಾಟಕ ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)*

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ನ್ನು (2000 ದ ಕರ್ನಾಟಕ ಅಧಿನಿಯಮ ಸಂಖ್ಯೆ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ.

ಭಾರತ ಗಣರಾಜ್ಯದ ಐವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ :-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ .-** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2003 ಎಂದು ಕರೆಯತಕ್ಕದ್ದು.

(2) ಇದು ಕೂಡಲೇ ಜಾರಿಗೆ ಬರತಕ್ಕದ್ದು.

**2. 4 ನೇ ಪ್ರಕರಣದ ತಿದ್ದುಪಡಿ .-** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ರ (2000 ದ ಕರ್ನಾಟಕ ಅಧಿನಿಯಮ ಸಂಖ್ಯೆ 29) 4 ನೇ ಪ್ರಕರಣದ (ಡಿ) ಖಂಡದಲ್ಲಿ "ಎರಡು ವರ್ಷಗಳಿಗೆ" ಎಂಬ ಪದಗಳಿಗೆ "ಮೂರು ವರ್ಷಗಳಿಗೆ" ಎಂಬ ಪದಗಳನ್ನು ಯಾವಾಗಲೂ ಪ್ರತಿಯೋಜಿಸಲಾಗಿದೆಯೆಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಮ.ರಾ. ಹೆಗಡೆ**

ಸರ್ಕಾರದ ಕಾರ್ಯದರ್ಶಿ,

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

---

ಕರ್ನಾಟಕ ರಾಜ್ಯ ಪತ್ರದ ಭಾಗIVಎ ವಿಶೇಷ ಪತ್ರಿಕೆ ಸಂಖ್ಯೆ: 310 ದಿನಾಂಕ: 27.3.2003 ರಲ್ಲಿ ಪ್ರಕಟಿತ
ಕಡತ ಸಂಖ್ಯೆ: ಸಂವ್ಯಶಾಇ 5 ಶಾಸನ 2003